ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಅರಮನೆ ರಸ್ತೆ, ಬೆಂಗಳೂರು-560001.

ಸಂಖ್ಯೆ:ಕಾಶಿಇ:ಶೈವಿ:184:ಕ.ಟೋ.ಆ:2022-23 ದಿನಾಂಕ: 14.09.2023

ಇವರಿಗೆ:
ಎಲ್ಲಾ ಜಿಲ್ಲಾ ಲೀಡ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ,
ಬೆಂಗಳೂರು, ಮೈಸೂರು, ಶಿವಮೊಗ್ಗ,
ಮಂಗಳೂರು, ಧಾರವಾಡ & ಕಲಬುರಗಿ.

ಮಾನ್ಯರೆ,

ವಿಷಯ: ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ 2023ರ ಅಕ್ಟೋಬರ್ 28, 29 ಮತ್ತು 30 ರಂದು ನಡೆಸಲಿರುವ ವಿವಿಧ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಸ್ಥಳಾವಕಾಶ ನೀಡುವ ಕುರಿತು.

ಉಲ್ಲೇಖ: ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು, ರವರ ಪತ್ರ ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್.-15/2022-23 (ಕೆಕೆ) ದಿನಾಂಕ:22.08.2023 & ಇಡಿ/ಕೆಇಎ/ಆಡಳಿತ/ಸಿ.ಆರ್.-15/2022-23 (ಆರ್.ಪಿ.ಸಿ) ದಿನಾಂಕ:22.08.2023

****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ, ವಿವಿಧ ಹುದ್ದೆಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದ್ದು, 2023ರ ಅಕ್ಟೋಬರ್ 28, 29 ಮತ್ತು 30 ರಂದು ನಡೆಸಲು ತಾತ್ಕಾಲಿಕ ವೇಳಾಪಟ್ಟಿಯನ್ನು ಸಿದ್ಧಪಡಿಸಿದ್ದು, ಸದರಿ ಪರೀಕ್ಷೆಗಳನ್ನು ನಡೆಸಲು ಪರೀಕ್ಷಾ ಕೇಂದ್ರಗಳು ಮತ್ತು ಸಿಬ್ಬಂದಿಗಳನ್ನು ಒದಗಿಸುವಂತೆ ಕೋರಿರುತ್ತಾರೆ.

ತತ್ಸಂಬಂಧವಾಗಿ, ಮೇಲ್ಕಂಡ ದಿನಾಂಕಗಳಂದು ತಮ್ಮ ವ್ಯಾಪ್ತಿಯಲ್ಲಿ ಬರುವ ಕಾಲೇಜುಗಳಲ್ಲಿ ಇತರೆ ಯಾವುದೇ ಪರೀಕ್ಷಾ / ಕಾರ್ಯಕ್ರಮಗಳನ್ನು ನಿಗಧಿಪಡಿಸದೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸಲಿರುವ ವಿವಿಧ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕಾಲೇಜಿನ ಕಟ್ಟಡ / ಕೊಠಡಿಗಳನ್ನು ಹಾಗೂ ಇತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ನೀಡಿ ಸಿಬ್ಬಂದಿಗಳ ನೆರವಿನೊಂದಿಗೆ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಲು ಸಹಕರಿಸುವಂತೆ ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

ಕಾಲೇಜು ಶಿಕ್ಷಣ ನಿರ್ದೇಶಕರು

ಪ್ರತಿಯನ್ನು:
1. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, 18ನೇ ಅಡ್ಡರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
3. ಕಛೇರಿ ಪ್ರತಿ.